## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆಃ 620/2014

**ಸಾಕ್ಷಿಯನ್ನು ದಿಃ 11.06.2024 ರಂದು ಕರೆಸಿ ಪ್ರಮಾಣವಚನ ಬೋದಿಸಲಾಯಿತು.**

| | | |
|---|---|---|
| ಹೆಸರು | ಕೃಷ್ಣ | ಸಿ.ಡಬ್ಲ್ಯೂಃ 35 ಪಿ.ಡಬ್ಲ್ಯೂಃ 29 |
| ತಂದೆಯ ಹೆಸರು | ವೀರಭದ್ರಚಾರಿ | |
| ವಯಸ್ಸು | 42 ವರ್ಷ | |
| ಕೆಲಸ | ಗಾರೆ ಕೆಲಸ | |
| ವಾಸಸ್ಥಳ | ಬೀಜಗನಹಳ್ಳಿ, ಹುಣಸೂರು | |

## ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

1. ನನಗೆ ಚಾಸಾ–1 ರಿಂದ 6 ಹಾಗೂ ಆರೋಪಿಯ ಪರಿಚಯ ಇಲ್ಲ. ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ದಾಖಲೆ ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ.110 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ.110(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ದಿಃ 10.10.2013 ರಂದು ನಾನು ಹುಣಸೂರು ಪಟ್ಟಣ ಠಾಣೆಗೆ ಹೋಗಿದ್ದಾಗ ಪೊಲೀಸರು ಸಹಿ ಮಾಡಲು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಬೇರೆ ಯಾರು ಸಹಿ ಮಾಡಿದ್ದಾರೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಮಹಜರ್ ಮಾಡಿಲ್ಲ, ಯಾವುದೇ ವಸ್ತುವನ್ನು ವಶಪಡಿಸಿಕೊಂಡಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

## ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ

2. ದಿಃ 10.10.2013 ರಂದು ಹುಣಸೂರು ಪಟ್ಟಣ ಠಾಣೆಯಲ್ಲಿ ಚಾಸಾ–5 ರವರು ಅವರ ಬಾಬ್ತು ಚೆಕ್ ಹಾಗೂ ಒಂದು ಸ್ಟೇಟ್ ಮೆಂಟ್ ಆಫ್ ಅಕೌಂಟ್ ಅನ್ನು ಪೊಲೀಸ್ ಠಾಣೆಯಲ್ಲಿ ಕೊಡುವ ಮೊದಲು ನನ್ನನ್ನು ಹಾಗೂ ಚಾಸಾ–34 ರವರನ್ನು

ಕರೆಯಿಸಿ ಪಂಚರಾಗಲು ಕೋರಿದ ಮೇರೆಗೆ ನಾವು ಹಾಜರಾಗಿದ್ದೇವು ಎಂದರೆ ಸರಿಯಲ್ಲ. ಹಾಗೂ ಪೊಲೀಸರು ಜರುಗಿಸಿದ ಸದರಿ ಅಮಾನತ್ತು ಮಹಜರ್ ಗೆ ನಾನು ಹಾಗೂ ಚಾಸಾ–34 ರವರು ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರು ಇಲ್ಲವೆಂದಿದ್ದಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸ. ಇದೆ.

(ಜೈಬುನ್ನಿಸಾ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ. ಎಂ. ಎಫ್. ಸಿ. , ಹುಣಸೂರು.